ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ____________

ಪತ್ರಿಕೆಯ ಹೆಸರು : NAME OF THE NEWS PAPER: ____________ ದಿನಾಂಕ : DATE : 22/4/2021

# ಕೂಡಲೇ ಕಾರ್ಯಪ್ರವೃತ್ತರಾಗಿ ಜಿಲ್ಲಾ ಉಸ್ತುವಾರಿ ಸಚಿವರಿಗೆ ಸಿಎಂ ಸೂಚನೆ

ಬೆಂಗಳೂರು: ರಾಜ್ಯದಲ್ಲಿ ಕೊರೊನಾ ಸೋಂಕು ವ್ಯಾಪಕವಾಗುತ್ತಿರುವ ಹಿನ್ನೆಲೆಯಲ್ಲಿ ಈಗಾಗಲೇ ಸರ್ಕಾರ ಸಾಕಷ್ಟು ಪರಿಣಾಮಕಾರಿ ಕ್ರಮಗಳನ್ನು ಕೈಗೊಂಡಿದೆ. ಇವುಗಳ ಅನುಷ್ಠಾನ ಮತ್ತು ಅಗತ್ಯ ಜಾಗೃತಿ ಮೂಡಿಸಲು ಕೂಡಲೇ ಎಲ್ಲ ಉಸ್ತುವಾರಿ ಸಚವರುಗಳು ಆಯಾ ಜಿಲ್ಲೆಗಳಿಗೆ ತೆರಳಿ ಕಾರ್ಯಪ್ರವೃತ್ತರಾಗುವಂತೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಸೂಚಿಸಿದ್ದಾರೆ.



ಈ ಕುರಿತು ವೈಯಕ್ತಿಕವಾಗಿ ಎಲ್ಲ ಸಚಿವರುಗಳಿಗೆ ಲಿಖಿತ ಪತ್ರ ರವಾನಿಸಿರುವ ಸಿಎಂ, ಕೊರೊನಾ ವೈರಾಣು ಹರಡುವಿಕೆಯನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಪ್ರತಿ ಜಿಲ್ಲೆಯಲ್ಲಿಯೂ ತ್ವರಿತವಾಗಿ ಕ್ರಮ ಕೈಗೊಳ್ಳಬೇಕಿರುವ ಕಾರಣಕ್ಕೆ ತಕ್ಷಣವೇ ಸಚಿವರು ಜಿಲ್ಲೆಗಳಿಗೆ ತೆರಳಿ ಎಂದು ಹೇಳಿದ್ದಾರೆ.

ಅಲ್ಲದೆ ಸೋಂಕಿತರಿಗೆ ಅಗತ್ಯ ವೈದ್ಯಕೀಯ ಸೌಲಭ್ಯ ಒದಗಿಸಲು ಜಿಲ್ಲಾಡಳಿತ ಜೊತೆ ಸದಾ ಸಂಪರ್ಕದಲ್ಲಿದ್ದ ವ್ಯವಹರಿಸಿ ಅಗತ್ಯ ನಿರ್ದೇಶನ ನೀಡುವಂತೆಯೂ ಸಿಎಂ ಸಚಿವರುಗಳಿಗೆ ನಿರ್ದೇಶನ ನೀಡಿದ್ದಾರೆ. ಸಚಿವರು ಜಿಲ್ಲೆಗಳಿಗೆ ತೆರಳುತ್ತಿಲ್ಲ ಎಂಬ ಪ್ರತಿಪಕ್ಷಗಳ ಆರೋಪ ಬೆನ್ನಲ್ಲೇ ಸಿಎಂ ಈ ತುರ್ತು ಕ್ರಮ ಕೈಗೊಂಡಿದ್ದಾರೆ.